ಭಾರತ ಮತ ಮಹಾ ಸಮರ

ಸಮಾಚಾರ ಸಣ್ಣದಲ್ಲ

ಮುಸ್ಲಿಮರ ಮೀಸಲು ಐತಿಹಾಸಿಕ ಅನ್ಯಾಯ

ಬೆಂಗಳೂರು: ಮುಸ್ಲಿಮರನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿಸುವಂತೆ ರಾಷ್ಟ್ರೀಯ ಹಿಂದುಳಿದ ಆಯೋಗಕ್ಕೆ ಸದ್ದಿಲ್ಲದೇ ಶಿಫಾರಸ್ಸು ಮಾಡುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಿಂದುಳಿದ ವರ್ಗಕ್ಕೆ ಐತಿಹಾಸಿಕ ಅನ್ಯಾಯ ಎಸಗುತ್ತಿದ್ದಾರೆ ಎಂದು ಮಾಜಿ ಸಚಿವ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ವಿ.ಸುನೀಲ್ ಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿ, ಹಿಂದುಳಿದ ವರ್ಗಗಳ ಸಂವಿಧಾನಬದ್ಧ ಹಕ್ಕನ್ನು ಕಸಿದುಕೊಂಡು ಅದನ್ನು ಮುಸ್ಲಿಂರಿಗೆ ಹಂಚುವ ಕುತ್ಸಿತ ಹಾಗೂ ತುಷ್ಟೀಕರಣ ರಾಜಕಾರಣದ ಸಂಚು ಇದರಲ್ಲಿ ಅಡಗಿದೆ. ಹಿಂದುಳಿದ ವರ್ಗಗಳ ಹಿತಾಸಕ್ತಿ ರಕ್ಷಣೆಯ ಛಾಂಪಿಯನ್ ತಾನೆಂದು ಸ್ವಯಂ ಘೋಷಿಸಿಕೊಂಡಿರುವ ಸಿದ್ದರಾಮಯ್ಯನವರಿಗೆ ಒಬಿಸಿ ಸಮುದಾಯಕ್ಕಿಂತ ಮುಸ್ಲಿಂ ಓಲೈಕೆಯೇ ಮುಖ್ಯ ಎಂಬುದು ಇದರಿಂದ ಸಾಬೀತಾಗಿದೆ . ಒಬಿಸಿ ಸಮುದಾಯದ ಪರ ಮಾತ್ರ ಹೃದಯ ಪ್ರದರ್ಶನ ಮಾಡುವುದನ್ನು ಬಿಟ್ಟು ಮಲತಾಯಿ ಧೋರಣೆ ಪ್ರಕಟಿಸಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಚರ್ಚೆಗೆ ಸ್ಥಳ ನಿಗದಿಪಡಿಸಲಿ

ಹಾವೇರಿ: ರಾಜ್ಯಕ್ಕೆ ಬರಬೇಕಾದ 18 ಸಾವಿರ ಕೋಟಿ ಬರ ಪರಿಹಾರ ನೀಡದೇ ಚೊಂಬು ನೀಡಿರುವ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮಿತ್ ಶಾ ಅವರಿಗೆ ಪವಿತ್ರ ಭೂಮಿ ಕರುನಾಡಿನಲ್ಲಿ ಕಾಲಿಡಲು ಯಾವುದೇ ಹಕ್ಕು ಇಲ್ಲ, ರಾಜ್ಯದ ಜನರ ಬಳಿ ಮತ ಕೇಳಲು ಯಾವುದೇ ನೈತಿಕತೆ ಇಲ್ಲ' ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಂದೀಪ್ ಸಿಂಗ್ ಸುರ್ಜೇವಾಲ ವಾಗ್ದಾಳಿ ನಡೆಸಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಕೇಂದ್ರಕ್ಕೆ ತೆರಿಗೆ ಕಟ್ಟಿರುವ ಕನ್ನಡಿಗರಿಗೆ ಕೊಡಬೇಕಾದ ಹಕ್ಕನ್ನು ನಾವು ಕೇಳುತ್ತಿದ್ದೇವೆ. ಪ್ರಧಾನಿ ಮೋದಿ ಅವರಲ್ಲಿ ಭಿಕ್ಷೆ ಬೇಡುತ್ತಿಲ್ಲ. 2023ರ ಸೆಪ್ಟೆಂಬರ್‌ನಲ್ಲಿ ರಾಜ್ಯ ಸರಕಾರ ಬರ ಘೋಷಿಸಿದೆ. ಅಂದೇ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸಚಿವರು 18 ಸಾವಿರ ಕೋಟಿ ಬರ ಪರಿಹಾರಕ್ಕೆ ಮನವಿ ಮಾಡಿ ದ್ದಾರೆ. ಇದುವರೆಗೆ ನಯಾಪೈಸೆ ಬಿಡುಗಡೆ ಮಾಡಿ ಲ್ಲ. ಪರಿಹಾರ ನೀಡಿದ ನಂತರ ಕರ್ನಾಟಕಕ್ಕೆ ಓಟು ಕೇಳಲು ಬನ್ನಿ. ಮೇಕೆದಾಟು, ಮಹದಾಯಿ, ಕಳಸಾ ಬಂಡೂರಿ ಯೋಜನೆಗೆ ಮೋದಿಯವರು ಅನು ಮತಿ ಕೊಡಿಸಿಲ್ಲ, ಭದ್ರಾ ಮೇಲ್ದಂಡೆ ಯೋಜನೆಗೆ 6 ಸಾವಿರ ಕೋಟಿ ಬಿಡುಗಡೆ ಮಾಡಿಲ್ಲ ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿ ಸರಕಾರವನ್ನು ಜನರು ಕಿತ್ತೊಗೆಯಿರಿ

ಮೈಸೂರು: ಬಹುತ್ವ ಭಾರತ ಉಳಿಸಿಕೊಳ್ಳಲು, ಭ್ರಷ್ಟಾಚಾರ ನಿರತ, ಬೆಲೆಯೇರಿಕೆ ತಡೆಯದ ಬಿಜೆಪಿ ಸರಕಾರವನ್ನು ಜನರು ಅಧಿಕಾರದಿಂದ ಕಿತ್ತೊಗೆಯಬೇಕು ಎಂದು ಆಮ್ ಆದ್ಮಿ ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಮುಖ್ಯಮಂತ್ರಿಚಂದ್ರು ಮನವಿ ಮಾಡಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ಭದ್ರತೆಯನ್ನೇ ಚುನಾವಣೆ ವಿಷಯವಾಗಿ ಬಳಸಿಕೊಳ್ಳುವ ಬಿಜೆಪಿ ಅವಧಿಯಲ್ಲಿ 40 ಸಿಆರ್‌ಪಿಎಫ್ ಯೋಧರು ಅನ್ಯಾಯವಾಗಿ ಸತ್ತಿದ್ದಾರೆ. ಗುತ್ತಿಗೆ ಆಧಾರದಲ್ಲಿ ಯೋಧರನ್ನು ನೇಮಕ ಮಾಡುವ ಕಳಪೆ ಯೋಜನೆ ಅಗ್ನಿವೀರ್ ಜಾರಿ ಮಾಡಲಾಗಿದೆ ಎಂದು ಹರಿಹಾಯ್ದರು. ಬಿಲ್ಕಿಸ್ ಬಾನು ಎಂಬ ಗರ್ಭಿಣಿಯನ್ನು ಅತ್ಯಾಚಾರ ಮಾಡಿದವರಿಗೆ ಕ್ಷಮಾಧಾನ ಕೊಡಿಸಿದ್ದ ಬಿಜೆಪಿ, ರಾಜ್ಯದಲ್ಲಿ ತಾನು ಮಹಿಳೆಯ ರಕ್ಷಕ ಎಂಬಂತೆ ಹಾರಾಡುತ್ತಿದೆ. ನೋಟು ಅಮಾನ್ಯೀಕರಣ, ಚುನಾವಣೆ ಬಾಂಡ್ ಹಗರಣ ಮೂಲಕ ದೇಶವನ್ನೇ ಸಂಕಷ್ಟಕ್ಕೆ ದೂಡಿ, ಲೀಗಲ್ ಭ್ರಷ್ಟಾಚಾರ ನಡೆಸಿದೆ. ಸಾಮಾನ್ಯ ಅಭ್ಯರ್ಥಿ, ಜನರ ಕಷ್ಟಕ್ಕೆ ಸ್ಪಂದಿಸುವ ಎಂ. ಲಕ್ಷ್ಮಣ ಅವರನ್ನು ಗೆಲ್ಲಿಸಿ ಇಂಡಿ ಮೈತ್ರಿಕೂಟಕ್ಕೆ ಜನ'ಬಲ ನೀಡಬೇಕು ಎಂದು ಮನವಿ ಮಾಡಿದರು.

ಮಂಜುನಾಥ್‌ರನ್ನು ಕೇಂದ್ರ ಸಂಪುಟಕ್ಕೆ ಸೇರಿಸಿಕೊಳ್ಳಲು ಮೋದಿ ಉತ್ಸುಕ | ವೈದ್ಯರಾಗಿ ಲಕ್ಷಾಂತರ ಜನರ ಜೀವ ಉಳಿಸಿದ ಮಂಜುನಾಥ್ ಸೇವೆ ರಾಷ್ಟ್ರ ಮಟ್ಟಕ್ಕೆ ಅಗತ್ಯ

ಡಾ.ಮಂಜುನಾಥ್ ಗೆದ್ದರೆ ಕೇಂದ್ರದಲ್ಲಿ ಸಚಿವ

ಬೆಂಗಳೂರು: ಲಕ್ಷಾಂತರ ಜನರ ಪ್ರಾಣ ಉಳಿಸಿರುವ ಬೆಂಗಳೂರು ಗ್ರಾಮಾಂತರ ಬಿಜೆಪಿ ಅಭ್ಯರ್ಥಿ ಡಾ.ಸಿ.ಎನ್ ಮಂಜುನಾಥ್ ಗೆದ್ದರೆ ಕೇಂದ್ರದಲ್ಲಿ ಸಚಿವರನ್ನಾಗಿ ನೇಮಿಸಲು ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಉತ್ಸುಕರಾಗಿದ್ದಾರೆ ಎಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರದ ವಿವಿಧ ಭಾಗದಲ್ಲಿ ತಮ್ಮ ಅಳಿಯ, ಬಿಜೆಪಿ ಅಭ್ಯರ್ಥಿ ಡಾ.ಸಿ.ಎನ್.ಮಂಜುನಾಥ್ ಪರ ಪ್ರಚಾರ ನಡೆಸಿದ ದೇವೇಗೌಡ, ಕೇಂದ್ರ ಸಚಿವ ಸಂಪುಟಕ್ಕೆ ಮಂಜುನಾಥ್ ಅವರನ್ನು ಸೇರ್ಪಡೆ ಮಾಡಿಕೊಳ್ಳಲು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಉತ್ಸುಕರಾಗಿದ್ದಾರೆ ಎಂದರು.

ಮಂಜುನಾಥ್ ಅವರು ತಮ್ಮ ವೈದ್ಯ ವೃತ್ತಿಯಲ್ಲಿ ಎಂಟು ಲಕ್ಷಕ್ಕೂ ಅಧಿಕ ಆಪರೇಷನ್ ಮಾಡಿ ಬಡವರಿಗೆ ಸಹಾಯ ಮಾಡಿದ್ದಾರೆ. ಹೀಗಾಗಿ ರಾಷ್ಟ್ರೀಯ ನಾಯಕರು ಅವರನ್ನು ತಮ್ಮ ಸಂಪುಟದಲ್ಲಿ ಸೇರಿಸಬೇಕೆಂದು ಬಯಸಿದ್ದಾರೆ. ನಾನು ಇಲ್ಲಿನ ಜನರನ್ನು ಮಂಜುನಾಥ್ ಪರ ಮತ ಚಲಾಯಿಸುವಂತೆ ಒತ್ತಾಯಿಸುತ್ತೇನೆ ಎಂದು ಕೇಳಿದರು.

ಕೇಂದ್ರದಲ್ಲಿ ಮೋದಿ ಮತ್ತು ಶಾ ಅವರು ಡಾ ಮಂಜುನಾಥ್ ಅವರ ಶಕ್ತಿಯನ್ನು ಗುರುತಿಸಿ ಬೆಂಗಳೂರು ಗ್ರಾಮಾಂತರದಿಂದ ಬಿಜೆಪಿಯಿಂದ ಸ್ಪರ್ಧಿಸಲು ಅವಕಾಶ ನೀಡುವಂತೆ ಕೇಳಿಕೊಂಡರು. ಮಂಜುನಾಥ್ ಅವರ ಸೇವೆ ರಾಷ್ಟ್ರಮಟ್ಟದಲ್ಲಿ ಅಗತ್ಯವಿದೆ. ಇದು ಅನಿವಾರ್ಯ ಎಂದು ಎಂದು ಬಿಜೆಪಿ ನಾಯಕರು ಹೇಳಿದ್ದರು ಎಂದರು.

ಬಿ.ಎಸ್.ಯಡಿಯೂರಪ್ಪ ಅವರು ಮುಖ್ಯಮಂತ್ರಿ ಆಗಿದ್ದಾಗ, ಜಯದೇವದಲ್ಲಿ ನಿರ್ದೇಶಕರಾಗಿದ್ದ ಡಾ. ಮಂಜುನಾಥ್ ಅವರ ಅವಧಿ ವಿಸ್ತರಿಸಿದ್ದರು. ಮಂಜುನಾಥ್ ಅವರು ಆಸ್ಪತ್ರೆಯಲ್ಲಿ ಹಾಸಿಗೆಯ ಸಾಮರ್ಥ್ಯ ಹೆಚ್ಚಿಸಿದ್ದರು. ಅವರ ಸೇವೆ ರಾಷ್ಟ್ರಮಟ್ಟಕ್ಕೂ ಸಲ್ಲುವಂತಾಗಬೇಕು ಎಂದು ಹೇಳಿದರು.

ರಾಹುಲ್ ಗಾಂಧಿಗೆ ವ್ಯವಹಾರಿಕ ಜ್ಞಾನವಿಲ್ಲ

ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಹಲವು ಭರವಸೆಗ ಳನ್ನು ನೀಡಿದೆ. ಆದರೆ, ಎಂದಿಗೂ ಅಧಿಕಾರಕ್ಕೆ ಬರುವುದಿಲ್ಲ ಎಂದು ಖಚಿತವಾಗಿ ಗೊತ್ತಿರುವ ಏಕೈಕ ಪಕ್ಷ ಮಾತ್ರ ಇಷ್ಟು ಭರವಸೆ ನೀಡುತ್ತದೆ. ಈ ಪ್ರಣಾಳಿಕೆ ನೋಡಿದರೆ, ರಾಹುಲ್ ಗಾಂಧಿ ಅವರಿಗೆ ವ್ಯಾವಹಾರಿಕ ಜ್ಞಾನವಿಲ್ಲ ಎನ್ನುವುದು ಸ್ಪಷ್ಟ ಎಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ವ್ಯಂಗ್ಯವಾಡಿದರು. ಕಾಂಗ್ರೆಸ್ ಈ ದೇಶವನ್ನು ತಲೆಕೆಳಗಾಗಿ ಮಾಡಲು ಬಯಸುತ್ತಿದೆ ಮತ್ತು ಅದು ನೀಡಿದ ಯಾವುದೇ ಭರವಸೆಗಳು ಈಡೇರಿಸಲು ಸಾಧ್ಯವಿಲ್ಲ. ರಾಹುಲ್ ಗಾಂಧಿ ಅವರು ಸಂಪತ್ತು ಸಮೀಕ್ಷೆ ಮಾಡಿ, ಮರು ಹಂಚಿಕೆ ಮಾಡಲು ಬಯಸುತ್ತಿದ್ದಾರೆ. ಅವರು ತಮ್ಮನ್ನು ತಾವು ಮಾಸ್ ಲೀಡರ್ ಎಂದು ಭಾವಿಸಿದ್ದಾರೆಯೇ? ಎಂದು ಪ್ರಶ್ನಿಸಿದರು. ರಾಹುಲ್ ಗಾಂಧಿ ಅವರು 30 ಲಕ್ಷ ಹೊಸ ಕೇಂದ್ರ ಸರಕಾರಿ ಉದ್ಯೋಗಗಳನ್ನು ನೀಡುವ ಭರವಸೆ ನೀಡಿದ್ದಾರೆ. ಆದರೆ, ಪ್ರಸ್ತುತ ಇರುವುದೇ 40 ಲಕ್ಷ ಮಂಜೂರಾದ ಹುದ್ದೆಗಳು. ಹೀಗಿರುವಾಗ ರಾತ್ರೋರಾತ್ರಿ 30 ಲಕ್ಷ ಉದ್ಯೋಗಗಳನ್ನು ಹೇಗೆ ಸೃಷ್ಟಿಸುತ್ತಾರೆ? ಆ ಜನರಿಗೆ ಎಷ್ಟು ಸಂಬಳ ನೀಡುತ್ತಾರೆ? ಅವರು ಎಲ್ಲಿ ಕೆಲಸ ಮಾಡುತ್ತಾರೆ ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರದಂತಹ ಭ್ರಷ್ಟ ಸರಕಾರವನ್ನು ರಾಜ್ಯದಿಂದ ಕಿತ್ತೊಗೆಯುವವರೆಗೂ ನಾನು ವಿರಮಿಸುವುದಿಲ್ಲ. ಮೇ 5ರವರೆಗೆ ಕರ್ನಾಟಕದಾದ್ಯಂತ ಸಂಚರಿಸಿ ಎನ್‌ಡಿಎ ಅಭ್ಯರ್ಥಿಗಳ ಪರ ಮತ ಯಾಚಿಸುತ್ತೇನೆ.

– ಎಚ್.ಡಿ.ದೇವೇಗೌಡ, ಮಾಜಿ ಪ್ರಧಾನಿ

ರಾಘವೇಂದ್ರ ಬ್ಯಾಂಕ್ ಹಗರಣ ತನಿಖೆಗೆ ಎಸ್‌ಐಟಿ?

ಅಕ್ರಮದ ಬಗ್ಗೆ ಸರಕಾರ ಗಂಭೀರ: ಡಿಕೆಶಿ

ಬೆಂಗಳೂರು: ಭಾರಿ ಸದ್ದು ಮಾಡಿದ್ದ ಗುರು ರಾಘವೇಂದ್ರ ಸಹಕಾರಿ ಬ್ಯಾಂಕ್ ಹಗರಣದ ತನಿಖೆಗೆ ಎಸ್‌ಐಟಿ ರಚಿಸುವಂತೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಸಲಹೆ ನೀಡಿದ ಬೆನ್ನಲ್ಲೇ, ಇದೀಗ ಎಸ್‌ಐಟಿ ರಚನೆಯ ಸುಳಿವನ್ನು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಚುನಾವಣೆ ಬಳಿಕ ಗುರು ರಾಘವೇಂದ್ರ ಸಹಕಾರಿ ಬ್ಯಾಂಕ್ ಹಗರಣದ ತನಿಖೆಯನ್ನು ಎಸ್‌ಐಟಿಗೆ ವಹಿಸುವ ಬಗ್ಗೆ ನಿರ್ಧರಿಸಲಾಗುವುದು. 2,500 ಕೋಟಿ ರು. ಅಕ್ರಮ ಹಾಗೂ 6 ಲಕ್ಷ ಠೇವಣಿದಾರರಿದ್ದ ಗುರು ರಾಘವೇಂದ್ರ ಸಹಕಾರಿ ಬ್ಯಾಂಕ್ ಹಗರಣದ ತನಿಖೆ ಬಗ್ಗೆ ಎಸ್‌ಐಟಿ ರಚನೆ ಮಾಡುವಂತೆ ಪ್ರಿಯಾಂಕಾ ಗಾಂಧಿ ಅವರು ಸಿಎಂ ಸಿದ್ದರಾಮಯ್ಯಗೆ ಸಲಹೆ ನೀಡಿದ್ದಾರೆ. ರಾಜ್ಯಕ್ಕೆ ಲೋಕಸಭಾ ಚುನಾವಣಾ ಪ್ರಚಾರಕ್ಕೆ ಆಗಮಿಸಿದ್ದ ಪ್ರಿಯಾಂಕಾ ಗಾಂಧಿ ಅವರನ್ನು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸೌಮ್ಯ ರೆಡ್ಡಿ ಹಾಗೂ ಸಂತ್ರಸ್ತರ ಪರವಾಗಿ ಹೋರಾಟ ಮಾಡುತ್ತಿರುವ ಹೋರಾಟಗಾರರ ನಿಯೋಗವು ಭೇಟಿ ಮಾಡಿ ಮನವಿ ಸಲ್ಲಿಸಿದೆ ಎಂದರು.

ನಿಯೋಗವು ನ್ಯಾಯ ಕೊಡಿಸುವ ನಿಟ್ಟಿನಲ್ಲಿ ತಮ್ಮ ಪರವಾಗಿ ಧ್ವನಿ ಎತ್ತುವಂತೆ ಮನವಿ ಮಾಡಿದೆ. ಇದಕ್ಕೆ ಸ್ಪಂದಿಸಿದ ಪ್ರಿಯಾಂಕಾ ಗಾಂಧಿ ಅವರು, ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಎಸ್‌ಐಟಿ ರಚನೆ ಮಾಡುವಂತೆ ಸಲಹೆ ಕೊಡುವುದಾಗಿ ತಿಳಿಸಿದ್ದಾರೆ. ಸಿಬಿಐಗೆ ಕೊಡುತ್ತೇವೆ ಎಂದು ವಿಧಾನಸಭೆಯಲ್ಲಿ ಹೇಳಿದ್ದೇವು. ಸಿಬಿಐಗೆ ಕೊಟ್ಟರೂ ಕೂಡ ತನಿಖೆ ಪ್ರಾರಂಭವಾಗಿಲ್ಲ. ಈ ಹಗರಣದಲ್ಲಿ ಬಿಜೆಪಿ ನಾಯಕರೇ ಭಾಗಿಯಾಗಿದ್ದಾರೆ ಎಂಬ ಆರೋಪವಿದೆ. ಹಾಗಾಗಿ, ಪ್ರಕರ ಣದ ತನಿಖೆಯನ್ನು ಕೈಗೊಂಡಿಲ್ಲ. ಇದರಿಂ ದಾಗಿ ಲಕ್ಷಾಂತರ ಮಂದಿ ಠೇವಣಿದಾರರು ಬೀದಿಗೆ ಬಿದ್ದಿದ್ದಾರೆ. ಅವರಿಗೆ ನ್ಯಾಯ ಸಿಗಬೇಕಿದೆ ಎಂದು ತಿಳಿಸಿದರು.

ಮತದಾನ ಹೆಚ್ಚಿಸಲು ಆಯೋಗದಿಂದ ಜಾಗೃತಿ

ಮತದಾನ ದಾಖಲೆ ಬರೆಯುತ್ತಾ ಚುನಾವಣೆ?

ಬೆಂಗಳೂರು: ರಾಜ್ಯದಲ್ಲಿ 2 ಹಂತಗಳಲ್ಲಿ ನಡೆಯಲಿರುವ ಲೋಕಸಭೆ ಚುನಾವಣೆಯ ಮೊದಲ ಹಂತದ ಮತ ದಾನ ಶುಕ್ರವಾರ (ಏ. 26) ನಡೆಯಲಿದ್ದು, ಮತದಾರರ ಕಣ್ಣು ರಾಜಕೀಯ ಪಕ್ಷಗಳ ಅಭ್ಯರ್ಥಿಗಳ ಮೇಲಿದ್ದರೆ, ಚುನಾವಣಾ ಆಯೋಗದ ದೃಷ್ಟಿ ಮುಕ್ತ ಮತ್ತು ಶಾಂತಿಯುತ ಮತದಾನದ ಜತೆಗೆ ಮತದಾನ ಪ್ರಮಾಣ ಹೆಚ್ಚಿಸುವ ಕಡೆ ಇದೆ.

1980ರ ದಶಕದ ಬಳಿಕ ಮತದಾನ ಪ್ರಮಾಣದಲ್ಲಿ ಸಾಕಷ್ಟು ಏರಿಳಿತ ಕಂಡಿರುವ ಕರ್ನಾಟಕದಲ್ಲಿ 2009ರ ಬಳಿಕ ಮತದಾನ ಪ್ರಮಾಣದಲ್ಲಿ ಸಾಕಷ್ಟು ಏರಿಕೆ ಕಂಡಿದೆ. 2004ರಲ್ಲಿ ಶೇ. 65ರಷ್ಟು ಮತದಾನವಾಗಿದ್ದರೆ, 2009ರಲ್ಲಿ ಶೇ.58.8ಕ್ಕೆ ಇಳಿದಿತ್ತು. ಆದರೆ, ನಂತರದಲ್ಲಿ ಮತದಾನ ಪ್ರಮಾಣ ಹೆಚ್ಚಳಕ್ಕೆ ಚುನಾವಣಾ ಆಯೋಗ ಮತ್ತು ವಿವಿಧ ಸಂಘ ಸಂಸ್ಥೆಗಳು ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮಗಳಿಂದಾಗಿ ಮತದಾನ ಹೆಚ್ಚಾಗಿತ್ತು. 2014ರಲ್ಲಿ ಶೇ. 67.2ರಷ್ಟು ಮತದಾನವಾಗಿದ್ದರೆ, 2019ರಲ್ಲಿ ದಾಖಲೆಯ ಶೇ. 71 ಮಂದಿ ತಮ್ಮ ಹಕ್ಕು ಚಲಾಯಿಸಿದ್ದರು.

ಈ ಬಾರಿ ಮತದಾನ ಪ್ರಮಾಣ ಹೆಚ್ಚಳಕ್ಕೆ ಸಾಕಷ್ಟು ಪ್ರಯತ್ನಗಳು ನಡೆಯುತ್ತಿವೆ. ಅದರಲ್ಲೂ ಪ್ರತಿ ಬಾರಿ ಶೇ. 50ರ ಆಸುಪಾಸಿನಲ್ಲಷ್ಟೇ ಮತದಾನವಾಗುತ್ತಿರುವ ಬೆಂಗಳೂರಿನಲ್ಲಿ ಇದಕ್ಕಾಗಿ ಅತಿ ಹೆಚ್ಚು ಕಸರತ್ತು ನಡೆಯುತ್ತಿದ್ದು, ಮತದಾರರನ್ನು ಮತಗಟ್ಟೆ ಕಡೆ ಸೆಳೆಯಲು ಹೊಸ ರೀತಿಯ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ. ಇದು ಪರಿಣಾಮ ಬೀರಿ ಬೆಂಗಳೂರಿನಲ್ಲಿ ಹೆಚ್ಚು ಮತದಾನವಾದರೆ ರಾಜ್ಯದಲ್ಲಿ ಈ ಬಾರಿ ಮತ್ತೆ ದಾಖಲೆಯ ಮತದಾನವಾಗುವ ಸಾಧ್ಯತೆ ಇದೆ. ಏಕೆಂದರೆ, ರಾಜ್ಯಾದ್ಯಂತ ಇರುವ 5.42 ಕೋಟಿ ಮತದಾರರ ಪೈಕಿ ಬೆಂಗಳೂರು ಜಿಲ್ಲೆ ಒಂದರಲ್ಲೇ 81.90 ಲಕ್ಷ ಮತದಾರರಿದ್ದಾರೆ. ರಾಜ್ಯದ 28 ಲೋಕಸಭಾ ಕ್ಷೇತ್ರಗಳ ಪೈಕಿ ಎರಡು ಹಂತಗಳಲ್ಲಿ ತಲಾ 14 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯುತ್ತಿದೆ. ಬಿಬಿಎಂಪಿ ವ್ಯಾಪ್ತಿಯ ಮೂರು ಕ್ಷೇತ್ರಗಳು ಮತ್ತು ಬೆಂಗಳೂರು ನಗರ ಜಿಲ್ಲೆಯ ಪ್ರದೇಶಗಳು ಬರುವ ಎರಡು ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯುತ್ತಿ ರುವುದರಿಂದ ಮೊದಲ ಹಂತದಲ್ಲಿ ಹೆಚ್ಚು ಮತದಾನವಾದರೆ ಹೊಸ ದಾಖಲೆ ಬರೆಯುವುದು ನಿಶ್ಚಿತ. ಏಕೆಂದರೆ, ಪ್ರತಿ ಬಾರಿ ರಾಜ್ಯದ ಇತರೆ ಭಾಗಗಳಿಗೆ ಹೋಲಿಸಿದರೆ ಬೆಂಗಳೂರಿನಲ್ಲಿ ಅತಿ ಕಡಿಮೆ ಮತದಾನವಾಗುವುದರಿಂದ ರಾಜ್ಯದ ಸರಾಸರಿಯೂ ಇಳಿಮುಖವಾಗುತ್ತಿದೆ. ಈ ಬಾರಿ ಬೆಂಗಳೂರಿನ ಮತದಾರರು ಯಾವ ರೀತಿ ಪ್ರತಿಕ್ರಿಯಿಸುತ್ತಾರೆ ಎಂಬುದರ ಮೇಲೆ ಮತದಾನ ಪ್ರಮಾಣ ನಿರ್ಧಾರವಾಗುತ್ತದೆ.

1980ರ ಬಳಿಕ ರಾಜ್ಯದ ಮತದಾನ ಪ್ರಮಾಣ

2019	ಶೇ. 71.0
2014	ಶೇ. 67.2
2009	ಶೇ. 58.8
2004	ಶೇ. 65.0
1999	ಶೇ. 67.6
1996	ಶೇ. 60.2
1991	ಶೇ. 54.8
1989	ಶೇ. 67.5
1984	ಶೇ. 65.7
1980	ಶೇ. 57.7



ಆಮಿಷವೊಡ್ಡಿ ಯಾರನ್ನೂ ಬಿಜೆಪಿಗೆ ಸೇರಿಸಿಕೊಳ್ಳುತ್ತಿಲ್ಲ: ಡಾ.ರಾಧಾ ಮೋಹನ್‌ದಾಸ್

ಡಾ.ಸುಶ್ರುತ್ ಗೌಡ ಬಿಜೆಪಿಗೆ ಸೇರ್ಪಡೆ

ಬೆಂಗಳೂರು: ರಾಹುಲ್ ಗಾಂಧಿ ನೇತೃತ್ವದ ಭಾರತ್ ಜೋಡೋ ಯಾತ್ರೆಯಲ್ಲಿ ಸಕ್ರಿಯವಾಗಿ ತೊಡಗಿಕೊಂಡಿದ್ದ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ, ಮೈಸೂರಿನ ಡಾ.ಸುಶ್ರುತ್ ಗೌಡ ಬುಧವಾರ ಬಿಜೆಪಿ ಸೇರ್ಪಡೆಯಾಗಿದ್ದಾರೆ.

ನಗರದ ಬಿಜೆಪಿ ಚುನಾವಾ ಮಾಧ್ಯಮ ಕೇಂದ್ರದಲ್ಲಿ ಲೋಕಸಭೆ ಚುನಾವಣೆ ಉಸ್ತುವಾರಿ ಡಾ.ರಾಧಾ ಮೋಹನ್‌ದಾಸ್ ಅಗರವಾಲ್, ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ ಮತ್ತಿತರರು ಡಾ.ಸುಶ್ರುತ್ ಗೌಡ ಅವರಿಗೆ ಬಿಜೆಪಿ ಧ್ವಜ ಹಸ್ತಾಂತರಿಸಿ ಪಕ್ಷಕ್ಕೆ ಬರಮಾಡಿಕೊಂಡರು.

ಈ ವೇಳೆ ಮಾತನಾಡಿದ ಡಾ.ರಾಧಾ ಮೋಹನ್ ದಾಸ್ ಅಗರವಾಲ್, ಯಾವುದೇ ಆಮಿಷವೊಡ್ಡಿ ಪಕ್ಷಕ್ಕೆ ಸೇರ್ಪಡೆ ಮಾಡಿಕೊಳ್ಳುವುದು ಬಿಜೆಪಿಯ ಜಾಯಮಾನ ಅಲ್ಲ. ಸಮಾಜ ಸೇವೆ, ಸ್ವಾರ್ಥ ರಹಿತವಾಗಿ ಸಂಘಟನಾ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವ, ಪಕ್ಷದ ವಿಚಾರಧಾರೆ ಒಪ್ಪಿ ಬರುವವರಿಗೆ ಅವಕಾಶವಿದೆ. ರಾಜಕೀಯ ಅಧಿಕಾರಕ್ಕಿಂತ ಜನಸೇವೆಯೇ ಬಿಜೆಪಿಗೆ ಮುಖ್ಯವಾಗಿದೆ ಎಂದರು. ಡಾ. ಸುಶ್ರುತ್ ಗೌಡ ಮಾತನಾಡಿ, ಸುಮಾರು ಐದೂವರೆ ತಿಂಗಳು ಭಾರತ್ ಜೋಡೊದಲ್ಲಿ ತೊಡಗಿಸಿಕೊಂಡಿದ್ದೆ. ಕೆಪಿಸಿಸಿ ಸೇರಿದ ಮೇಲೆ ನನ್ನ ದೂರದೃಷ್ಟಿ ಈಡೇರಿಸಲು ಅಲ್ಲಿದ್ದು ಅಸಾಧ್ಯ ಎನ್ನಿಸಿತು. ಅಲ್ಲದೆ, ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿ ಗಮನಿಸಿ ಬಿಜೆಪಿ ಸೇರಲು ಯೋಚಿಸಿದೆ ಎಂದರು. ಬಿಜೆಪಿ ರಾಜ್ಯ ಸಂಘಟನಾ ಪ್ರಧಾನ ಕಾರ್ಯದರ್ಶಿ ರಾಜೇಶ್ ಜಿ.ವಿ., ರಾಜ್ಯ ಪ್ರಧಾನ ಕಾರ್ಯದರ್ಶಿ ನಂದೀಶ್ ರೆಡ್ಡಿ, ರಾಜ್ಯ ವಕ್ತಾರ ಎಂ.ಜಿ.ಮಹೇಶ್, ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಮತ್ತಿತರರು ಇದ್ದರು.



ಮೈಸೂರಿನ ಡಾ.ಸುಶ್ರುತ ಗೌಡ ಅವರನ್ನು ಡಾ.ರಾಧಾ ಮೋಹನ್ ದಾಸ್ ಅಗರವಾಲ್, ಡಾ.ಸಿ.ಎನ್.ಅಶ್ವತ್ಥನಾರಾಯಣ, ನಂದೀಶ್ ರೆಡ್ಡಿ, ಎಂ.ಜಿ.ಮಹೇಶ್ ಅವರು ಪಕ್ಷದ ಧ್ವಜ ಹಸ್ತಾಂತರಿಸುವ ಮೂಲಕ ಬಿಜೆಪಿಗೆ ಬರಮಾಡಿಕೊಂಡರು.

ಜನಸೇವೆ ಬಯಸಿ ಸೇರ್ಪಡೆ

ಡಾ.ಸುಶ್ರುತ್ ಗೌಡ ಅವರು ಆರೋಗ್ಯ ಸೇವೆಯಲ್ಲಿ ಸೇವೆ, ಸುಧಾರಣೆ ಬಯಸಿ ಕಾಂಗ್ರೆಸ್‌ನಲ್ಲಿದ್ದು, ಭಾರತ್ ಜೋಡೋ ಯಾತ್ರೆಯಲ್ಲಿ ಕೈಜೋಡಿಸಿದರು. ರಾಹುಲ್ ಗಾಂಧಿ ಸೇರಿದಂತೆ ಕಾಂಗ್ರೆಸ್‌ನ ಹಿರಿಯ ನಾಯಕರೊಂದಿಗೆ ಐದೂವರೆ ತಿಂಗಳು ಹೆಜ್ಜೆ ಹಾಕಿದ ಬಳಿಕ ಅವರಿಗೆ ಕಾಂಗ್ರೆಸ್‌ನ ಪರಿಸ್ಥಿತಿ, ಆ ಪಕ್ಷದ ನಾಯಕರ ಮನಸ್ಥಿತಿ ಅರ್ಥವಾಗಿ ತಮ್ಮ ವಿಚಾರಗಳು ಇವರಿಗೆ ಹೊಂದಿಕೊಳ್ಳುವುದಿಲ್ಲ ಎಂದು ತಿಳಿದು ಜನಸೇವೆ ಬಯಸಿ ಬಿಜೆಪಿ ಸೇರಿದ್ದಾರೆ ಎಂದು ಬಿಜೆಪಿ ಲೋಕಸಭೆ ಚುನಾವಣೆ ಉಸ್ತುವಾರಿ ಡಾ.ರಾಧಾ ಮೋಹನ್‌ದಾಸ್ ಅಗರವಾಲ್ ತಿಳಿಸಿದರು.

ಟೀಂ ಬೆಂಗಳೂರಿನ ಹೆಸರಲ್ಲಿ ಪ್ರತ್ಯೇಕ ಪ್ರಣಾಳಿಕೆ

ಬೆಂಗಳೂರು: ಲೋಕಸಭಾ ಚುನಾವಣೆಯಲ್ಲಿ ಈ ಬಾರಿ ಭರ್ಜರಿ ಸೀಟುಗಳನ್ನು ಪಡೆಯುವ ಲೆಕ್ಕಾಚಾರದಲ್ಲಿರುವ ಕಾಂಗ್ರೆಸ್ ಇದೀಗ, ಬೆಂಗಳೂರು ವ್ಯಾಪ್ತಿಯ ಐದು ಲೋಕಸಭಾ ಕ್ಷೇತ್ರಗಳಿಗೆ 'ಟೀಂ ಬೆಂಗಳೂರಿ'ನ ಹೆಸರಲ್ಲಿ ಪ್ರತ್ಯೇಕ ಪ್ರಣಾಳಿಕೆಯನ್ನು ಬಿಡುಗಡೆಗೊಳಿಸಿದೆ.

ಕೆಪಿಸಿಸಿ ಕಚೇರಿಯಲ್ಲಿ ಬೆಂಗಳೂರು ದಕ್ಷಿಣ ಕಾಂಗ್ರೆಸ್ ಅಭ್ಯರ್ಥಿ ಸೌಮ್ಯಾರೆಡ್ಡಿ, ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಾಜೀವ್ ಗೌಡ ಅವರ ನೇತೃತ್ವದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬೆಂಗಳೂರಿಗೆ ಪ್ರತ್ಯೇಕ ಪ್ರಣಾಳಿಕೆಯನ್ನು ಬಿಡುಗಡೆಗೊಳಿಸಿದರು.ಈ ವೇಳೆ ಮಾತನಾಡಿದ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಾಜೀವ್ ಗೌಡ, ಆರ್‌ಸಿಬಿ ಮಾತ್ರವಲ್ಲ ನಮ್ಮದೂ ಒಂದು ತಂಡ ರಚನೆಯಾಗಲಿದೆ. ಲೋಕಸಭೆ ಚುನಾವಣೆಯಲ್ಲಿ ಗೆದ್ದು ಬೆಂಗಳೂರು ಅಭಿವೃದ್ಧಿಗೆ ವಿಶೇಷ ಪ್ರಯತ್ನ ಮಾಡುತ್ತೇವೆ. ನಾವು ಐವರು ಗೆಲ್ಲುತ್ತೇವೆ, ಕೇಂದ್ರದಲ್ಲಿ ನಮ್ಮ ಸರಕಾರ ಬರಲಿದೆ, ರಾಜ್ಯದಲ್ಲಿ ನಮ್ಮದೇ ಸರಕಾರ ಇದೆ. ಬಿಬಿಎಂಪಿಗೂ ಚುನಾವಣೆ ನಡೆದು ನಮ್ಮ ಪಕ್ಷ ಅಧಿಕಾರ ಹಿಡಿಯಲಿದೆ. ಈ ಮೂಲಕ ತ್ರಿಬಲ್ ಇಂಜಿನ್ ಕೆಲಸ ಮಾಡಲಿದೆ ಎಂದು ಹೇಳಿದರು.

ನೀಡಿರುವ ಪ್ರಮುಖ ಘೋಷಣೆ

- ಬೆಂಗಳೂರು ಹಾಗೂ ಕರ್ನಾಟಕದಲ್ಲಿ ಒಂದು ಲಕ್ಷ ವಿದ್ಯಾರ್ಥಿಗಳಿಗೆ ಉದ್ಯೋಗ
- ಕೇಂದ್ರ ಸರಕಾರದಿಂದ ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿಗೆ ಒಂದು ಲಕ್ಷ ಕೋಟಿ ರು. ವಿಶೇಷ ಅನುದಾನ
- ಬೆಂಗಳೂರಿನಲ್ಲಿ ಇತ್ತೀಚೆಗೆ ಹೆಚ್ಚಾಗುತ್ತಿರುವ ನೀರಿನ ಸಮಸ್ಯೆ ನೀಗಿಸಲು ವಿಶೇಷ ಯೋಜನೆ
- ಬಿಬಿಎಂಪಿಗೆ ಇನ್ನಷ್ಟು ಶಕ್ತಿ ತುಂಬುವ ಕೆಲಸ ಹಾಗೂ ಅಧಿಕಾರ ವಿಕೇಂದ್ರೀಕರಣಕ್ಕೆ ಒತ್ತು
- ಕಾರ್ಯಕ್ಷೇತ್ರದಲ್ಲಿ ಮಹಿಳಾ ಸಬಲೀಕರಣಕ್ಕೆ ಇನ್ನಷ್ಟು ಒತ್ತು

ಬೆಂಗಳೂರು ಜನರ ಸುಗಮ ಸಂಚಾರಕ್ಕಾಗಿ ಸಬ್ ಅರ್ಬನ್, ಮೆಟ್ರೋ ಯೋಜನೆಯೊಂದಿಗೆ ಇಲ್ಲಿನ ಹಸಿರು ಪರಿಸರ ಕಾಪಾಡಲು ವಿಶೇಷ ಯೋಜನೆ ಜಾರಿಗೆ ತರಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ. ವೃತ್ತಿಪರ ಕಾರ್ಮಿಕರೇ ಅತಿ ಹೆಚ್ಚು ವಾಸಿಸುವ ಈ ಪ್ರದೇಶದಲ್ಲಿ ವಸತಿ ಮತ್ತು ಇತರೆ ಮೂಲಭೂತ ಸೌಕರ್ಯಗಳಿಗಾಗಿ ಕೇಂದ್ರ ಹಾಗೂ ರಾಜ್ಯ ಸರಕಾರದ ಮೂಲಕ ಅತಿ ಹೆಚ್ಚು ಅನುದಾನ ತರಲು ಸಿದ್ಧವಿದ್ದೇವೆ.

– ಸೌಮ್ಯಾರೆಡ್ಡಿ, ಬೆಂಗಳೂರು ದಕ್ಷಿಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ

ಬೆಂಗಳೂರಿಗೆ ಪ್ರತ್ಯೇಕ ಪ್ರಣಾಳಿಕೆಯನ್ನು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಸೌಮ್ಯಾ ರೆಡ್ಡಿ, ಕೆಪಿಸಿಸಿ ವಕ್ತಾರ ನಟರಾಜ ಗೌಡ, ಕೆಪಿಸಿಸಿ ಮಾಧ್ಯಮ ವಿಭಾಗದ ಐಶ್ವರ್ಯಬಿಡುಗಡೆಗೊಳಿಸಿದರು.

ದೇಶ ಸೇವೆಗೆ ಮಂಜುನಾಥ್ ಗೆಲ್ಲಿಸಿ

ಬೆಂಗಳೂರು: ವೈದ್ಯಕೀಯ ಕ್ಷೇತ್ರದಲ್ಲಿ ಅಪಾರ ಸೇವೆ ಮಾಡಿದ ಡಾ.ಸಿ.ಎನ್. ಮಂಜುನಾಥ್ ದೇಶ ಸೇವೆಯಲ್ಲಿ ತೊಡಗಲು ಸಂಸದರಾಗಬೇಕಿದೆ. ಪ್ರಜಾಪ್ರಭುತ್ವ ಉಳಿವಿಗೆ ಮಂಜುನಾಥ್ ಅವರನ್ನು ಗೆಲ್ಲಿಸಬೇಕಿದೆ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಡಿ.ಎಸ್.ವೀರಯ್ಯ ಹೇಳಿದ್ದಾರೆ.

ಪ್ರೆಸ್ ಕ್ಲಬ್‌ನಲ್ಲಿ ನಡೆದ ಹೋರಾಟಗಾರ ಬಿ.ಎಚ್.ಸುರೇಶ್ ಅವರ 'ಹೃದಯವಂತ ಡಾ.ಸಿ.ಎನ್.ಮಂಜುನಾಥ್' ಸಾಕ್ಷ್ಯಚಿತ್ರ ಬಿಡುಗಡೆ ಮಾಡಿ ಮಾತನಾಡಿ, ಲಕ್ಷಾಂತರ ಹೃದ್ರೋಗಿಗಳಿಗೆ ಜೀವದಾನ ನೀಡಿ, ನೊಂದವರ ಕಣ್ಣೀರು ಒರೆಸುವ ಕಾಯಕದಲ್ಲಿ ಮಾತಾಗಿರುವ ಹೃದಯವಂತ ಹೃದ್ರೋಗ ತಜ್ಞರು. ಜಯದೇವ ಆಸ್ಪತ್ರೆ ವಿಶ್ವಮಟ್ಟದಲ್ಲಿ ಪ್ರಖ್ಯಾತಿ ಪಡೆಯಲು ಇವರು ಪಟ್ಟಂತಹ ಶ್ರಮ ಅಗಾಧವಾದುದು. ಇವರು ಸೇವೆ ನಡೀ ದೇಶಕ್ಕೆ ಅಗತ್ಯವಾಗಿದ್ದು, ಇವರನ್ನು ಸಂಸದರನ್ನಾಗಿ ಆಯ್ಕೆ ಮಾಡಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮತದಾರರು ಸಂಕಲ್ಪ ಮಾಡಬೇಕು ಎಂದು ಕೋರಿದ್ದಾರೆ .

ಡಾ.ಸಿ.ಎನ್.ಮಂಜುನಾಥ್ ಅವರು ಜಯದೇವ ಆಸ್ಪತ್ರೆಯ 18 ವರ್ಷದ ಅಧಿಕಾರಾವಧಿಯಲ್ಲಿ ಅನೇಕ ರೋಗಿಗಳ ಪಾಲಿಗೆ ಜೀವನದಾತರು. ಮಂಜುನಾಥ್ ಅವರನ್ನು ಸಂಸದರನ್ನಾಗಿ ಆಯ್ಕೆ ಮಾಡಬೇಕಾದ ಹೊಣೆಗಾರಿಕೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜನ ಈ ಬಾರಿ ಅವರನ್ನು ಬಹುಮತಗಳಿಂದ ಗೆಲ್ಲಿಸುವ ಮೂಲಕ ದೇಶ ಸೇವೆಗೆ ಅನುವುಮಾಡಿಕೊಡಬೇಕು.

–ಸುರೇಶ್ ಬಾಬು, ಅಧ್ಯಕ್ಷ, ವಿಶ್ವ ಕನ್ನಡ ಕಲಾ ಕೂಟ

ಹೋರಾಟಗಾರ ಬಿ.ಎಚ್.ಸುರೇಶ್ ಅವರ 'ಹೃದಯವಂತ ಡಾ.ಸಿ.ಎನ್.ಮಂಜುನಾಥ್' ಸಾಕ್ಷ್ಯಾಚಿತ್ರ ಬಿಡುಗಡೆ ಮಾಡಲಾಯಿತು. ಡಿ.ಎಸ್.ವೀರಯ್ಯ, ಜೆಡಿಎಸ್ ಮುಖಂಡ ಎ.ಎಸ್.ಗೋವಿಂದೇಗೌಡ, ಒಕ್ಕಲಿಗರ ವಿಕಾಸ ವೇದಿಕೆಯ ಯಮುನಾ, ಪತ್ರಕರ್ತೆ ಪದ್ಮ ನಾಗರಾಜು, ಬಿ.ಎನ್.ಸುರೇಶ್ ಬಾಬು, ಸಾಹಿತಿ ಗುಣವಂತ ಮಂಜು ಭಾಗವಹಿಸಿದ್ದರು.

ಕಾಂಗ್ರೆಸ್‌ನ ತುಷ್ಟೀಕರಣ ನೀತಿ, ಓಲೈಕೆ ರಾಜಕಾರಣದ ಕುರಿತು ಮಾಹಿತಿ | ಇದು ಕ್ಯೂಆರ್ ಕೋಡ್ ಆಧಾರಿತ ಪೋಸ್ಟರ್ ಎಂದ ಡಾ.ಸಿ.ಎನ್.ಅಶ್ವತ್ಥನಾರಾಯಣ | ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿತ

ಕಾಂಗ್ರೆಸ್ ಡೇಂಜರ್ ಬಿಜೆಪಿಯಿಂದ ಪೋಸ್ಟರ್

ಬೆಂಗಳೂರು: ಬಿಜೆಪಿ ಚೊಂಬು ಟೀಕೆಗೆ ಪ್ರತಿಯಾಗಿ ಕಾಂಗ್ರೆಸ್ ಚಿಪ್ಪಿನ ತಿರುಗೇಟು ನೀಡಿದ್ದ ಬಿಜೆಪಿ ಇದೀಗ ಕ್ಯೂಆರ್ ಕೋಡ್ ಆಧರಿತ ಕಾಂಗ್ರೆಸ್ ಡೇಂಜರ್ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಿದೆ. ಈ ಮೂಲಕ ರಾಜ್ಯದಲ್ಲಿ ಪೋಸ್ಟರ್ ವಾರ್ ಇನ್ನಷ್ಟು ಜೋರಾಗಿದೆ.

ಬುಧವಾರ ಸುದ್ದಿಗೋಷ್ಠಿಯಲ್ಲಿ ಪೋಸ್ಟರ್ ಬಿಡುಗಡೆ ಮಾಡಿದ ಮಾಜಿ ಉಪಮುಖ್ಯ ಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ, ಕಾಂಗ್ರೆಸ್ ಡೇಂಜರ್ ಎಂಬ ಪೋಸ್ಟರ್‌ನಲ್ಲಿರುವ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿದರೆ, ಕಾಂಗ್ರೆಸ್ ಸರಕಾರದ ಅಲ್ಪಸಂಖ್ಯಾತರ ತುಷ್ಟೀಕರಣ ನೀತಿ, ಹಿಂದೂ ವಿರೋಧಿ ಕ್ರಮಗಳ ಮಾಹಿತಿ ಲಭ್ಯವಾಗುತ್ತದೆ ಎಂದು ಹೇಳಿದರು. ಕರ್ನಾಟಕ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾ ರಕ್ಕೆ ಬಂದ ದಿನದಿಂದ ಓಲೈಕೆ, ತುಷ್ಟೀಕರಣದ ರಾಜಕಾರಣ ಮುಂದುವರಿಸಿದೆ. ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದುಹೋಗಿದೆ. ಓಲೈಕೆ ಜೊತೆಗೆ ಭಯೋತ್ಪಾದಕರ ವಿಚಾರದಲ್ಲಿ ಮೃದು ಧೋರಣೆ ಈ ಸರಕಾರದ್ದು ಎಂದು ಆಕ್ಷೇಪ ವ್ಯಕ್ತಪಡಿಸಿ ದರಲ್ಲದೆ, ಇದೆಲ್ಲದರ ಮಾಹಿತಿಯನ್ನು ಜನರಿಗೆ ತಿಳಿಸಲು ಕಾಂಗ್ರೆಸ್ ಡೇಂಜರ್ ಎಂಬ ಪೋಸ್ಟರ್ ಬಿಡುಗಡೆ ಮಾಡಿ ರುವುದಾಗಿ ತಿಳಿಸಿದರು. ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣವನ್ನು ವೈಯಕ್ತಿಕ ಎಂದು ಕಾಂಗ್ರೆಸ್ ನಾಯಕರು ಹೇಳಿದ್ದರು. ಕೊನೆಗೆ ಆರೋಪಿಗಳನ್ನು ಪತ್ತೆ ಹಚ್ಚಲಾಗಿದೆ. ಕುಕ್ಕರ್ ಬಾಂಬ್ ಸ್ಫೋಟ ವಿಚಾರದಲ್ಲಿ ಭಯೋತ್ಪಾ ದಕರನ್ನು ಸೆರೆ ಹಿಡಿದಾಗ ಅವರನ್ನು ಭಯೋತ್ಪಾದಕರೆಂದು ಕರೆಯದಂತೆ ಹೇಳಿದ್ದರು. ಜೈ ಶ್ರೀರಾಂ ಎಂದವರು, ಹನುಮಾನ್ ಚಾಲೀಸ ಹಾಕಿದವರ ಮೇಲೆ ಹಲ್ಲೆ, ಮೋದಿಯವರ ಕುರಿತ ಹಾಡು ಬರೆದವರ ಮೇಲೆ ಹಲ್ಲೆ ನಡೆದಿದೆ. ಇದೆಲ್ಲಕ್ಕೂ ಕಾಂಗ್ರೆಸ್ ಸರಕಾರವೇ ಕಾರಣ ಎಂಬುದನ್ನು ಪೋಸ್ಟರ್‌ನಲ್ಲಿ ವಿವರಿಸಲಾಗಿದೆ ಎಂದರು. ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ, ರಾಜ್ಯ ವಕ್ತಾರರಾದ ಡಾ. ನರೇಂದ್ರ ರಂಗಪ್ಪ, ಅಶೋಕ್ ಗೌಡ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್ ಇದ್ದರು.

ಮಾಜಿ ಡಿಸಿಎಂ ಡಾ.ಸಿ.ಎನ್.ಅಶ್ವತ್ಥನಾರಾಯಣ, ಶಾಸಕ ಎಸ್.ಸುರೇಶ್‌ಕುಮಾರ್, ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಮತ್ತು ಬಿಜೆಪಿ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್.ಹರೀಶ್ ಅವರು 'ಕಾಂಗ್ರೆಸ್ ಡೇಂಜರ್' ಪೋಸ್ಟರ್ ಬಿಡುಗಡೆ ಮಾಡಿದರು.

ಪೋಸ್ಟರ್‌ನಲ್ಲಿ ಕ್ಯೂ ಆರ್ ಕೋಡ್ ಕೊಟ್ಟಿದ್ದು, ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ಆಗಿರುವ ಘಟನಾವಳಿಗಳ ಮಾಹಿತಿ ಲಭ್ಯವಾಗುತ್ತದೆ. ನೇಹಾ ಹಿರೇಮಠದ ಹತ್ಯೆಯ ಲವ್ ಜಿಹಾದ್ ಸಂಬಂಧಿತ ಹುಬ್ಬಳ್ಳಿಯ ಘಟನೆ, ಸಿಎಂ ಹೇಳಿಕೆ, ಗೃಹ ಇಲಾಖೆ, ಕಮೀಷನರ್ ನಡವಳಿಕೆ, ನೇಹಾರ ಪೋಷಕರಿಗೆ, ಕುಟುಂಬಕ್ಕಾದ ನೋವನ್ನು ಗಮನಿಸಬಹುದು.

–ಡಾ.ಸಿ.ಎನ್.ಅಶ್ವತ್ಥನಾರಾಯಣ, ಮಾಜಿ ಡಿಸಿಎಂ

ಕಾಂಗ್ರೆಸ್ಸಿನ ಮಾವೋವಾದಿ ಮಾನಸಿಕತೆ

ಮಾಜಿ ಸಚಿವ, ಶಾಸಕ ಎಸ್.ಸುರೇಶ್ ಕುಮಾರ್ ಮಾತನಾಡಿ, ಮತ ಚಲಾಯಿ ಸುವ ಮೊದಲು ದಯವಿಟ್ಟು ಕಾಂಗ್ರೆಸ್ ಪ್ರಣಾಳಿಕೆಯನ್ನು ಗಮನಿಸಿ. ಇಂಡಿ ಒಕ್ಕೂಟದ ಬೇರೆ ಬೇರೆ ಪಕ್ಷಗಳ ನಿಲುವನ್ನೂ ಗಮನಿಸಿ. ಇಂಡಿ ಒಕ್ಕೂಟ, ಕಾಂಗ್ರೆಸ್ ಮತ್ತು ಈ ಒಕ್ಕೂಟದ ಪಾಲುದಾರರು ಭಾರತಕ್ಕೆ ಯಾವ ಗತಿ ತರಬಹುದು ಎಂಬುದು ಇವರ ಹೇಳಿಕೆಗಳಿಂದ ಗೊತ್ತಾಗುತ್ತದೆ. ಕಾಂಗ್ರೆಸ್ ಪ್ರಣಾಳಿಕೆ ಬಿಡುಗಡೆ ಮಾಡಿದ್ದ ರಾಹುಲ್ ಗಾಂಧಿಯವರು, ಜನಗಣತಿ ಮಾಡಿ ದೇಶದ ಜನಸಂಖ್ಯೆ ಆಧಾರದಲ್ಲಿ ಸಂಪತ್ತಿನ ವಿತರಣೆ ಮಾಡುತ್ತೇವೆ ಎಂದಿದ್ದರು. ಅದು ಅಸಮಾನತೆ ಸರಿಪಡಿಸಲು ಪೂರಕ ಎಂದಿದ್ದರು. ಕಷ್ಟಪಟ್ಟು ದುಡಿದವರ ಹಣವನ್ನು ಕೂಡ ಏನೂ ಕಷ್ಟಪಡದೆ ಇರುವವರಿಗೆ ಹಂಚುತ್ತೇವೆ ಎಂಬ ಮಾವೋವಾದಿ ಮನಸ್ಥಿತಿ ಕಾಂಗ್ರೆಸ್‌ಗೆ ಬಂದಿದೆ. ಇವರಿಗೆ ಮಾತ್ರ, ದೆಹಲಿಯಲ್ಲಿ ತಾಯಿಗೊಂದು ಮನೆ, ಒಬ್ಬನೇ ಮಗನಿಗೊಂದು ಮನೆ ಬೇಕು. ಇದು ಸಂಪತ್ತಿನ ವಿತರಣೆಯೇ ಎಂದು ಗೊತ್ತಾಗುತ್ತಿಲ್ಲ ಎಂದು ವ್ಯಂಗ್ಯವಾಡಿದ ಅವರು, ಇದು ಕಾಂಗ್ರೆಸ್ಸಿನೊಳಗಡೆ ಉಂಟಾಗಿರುವ ಮಾವೋವಾದಿ ಮಾನಸಿಕತೆ ಎಂದು ದೂರಿದರು.